



ಅರುಣ ಪಿ. ಭಟ್ಟ

## ವಾರಭವಿಷ್ಯ: 3.12.2020ರಿಂದ 9.12.2020ರವರೆಗೆ




ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಗೋಚರವಾಗುತ್ತವೆ. ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ.ವಯಸ್ಕ ಮಕ್ಕಳಿಗಾಗಿ ಮದುವೆಗೆ ಸಂಬಂಧ ಒದಗಿಬರುವ ಅವಕಾಶ ಹೆಚ್ಚಿದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಹಾಗೂ ರಹಸ್ಯವಾದ ಸಂಗತಿಯೊಂದು ತಿಳಿದುಬರಲಿದೆ. ಶುಭದಿನ 8. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ವಿವಿಧ ಬಗೆಯಲ್ಲಿ ಯಶಸ್ಸು ದೊರೆಯಲಿದೆ. ಬರವಣಿಗೆ, ರಾಜಕೀಯ ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಪ್ರಗತಿ ಬಡ್ತಿ ದೊರೆಯುವ ಸಮಯ ಇದು. ಅಧಿಕಾರದಲ್ಲಿ ಇರುವವರು ನಿಮ್ಮ ಶ್ರಮಕ್ಕೆ ಮೆಚ್ಚುಗೆ ವ್ಯಕ್ತಪಡಿಸಲಿದ್ದಾರೆ. ಪೋಷಕರು ನಿಮ್ಮ ಪ್ರಗತಿಯಿಂದಾಗಿ ಬಹಳ ಸಂತೋಷ ಪಡಲಿದ್ದಾರೆ. ಶುಭದಿನ 4. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹೊಸದಾಗಿ ಉದ್ಯೋಗ ಹುಡುಕುತ್ತಿರುವವರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಸೋದರ ಸೋದರಿಯರ ಜತೆಗೆ ಒತ್ತಡದ ಸನ್ನಿವೇಶಗಳನ್ನು ಎದುರಿಸಬೇಕಾಗುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜನೆ ಮಾಡಲಿದ್ದೀರಿ. ಶುಭದಿನ 9. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ ಪಡೆಯುವ ಅವಕಾಶ ಇದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಉದ್ಯೋಗದಲ್ಲಿ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಸಾಮಾಜಿಕವಾಗಿ ನಿಮ್ಮ ಶ್ರಮ ಹಾಗೂ ದುಡಿಮೆಗೆ ಮೆಚ್ಚುಗೆ, ಮನ್ನಣೆ ದೊರೆಯಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಶುಭದಿನ 8. ಕಾಲ ಭೈರವನ ಸೇವೆ ಮಾಡಿರಿ.




ಈ ವಾರ ಉಲ್ಲಾಸಿತವಾಗಿ ಸಮಯ ಕಳೆಯಲಿದೆ. ರಾಜಕೀಯ ಕ್ಷೇತ್ರದಲ್ಲಿ ಇರುವವರ ಶ್ರಮಕ್ಕೆ ಮೆಚ್ಚುಗೆ ವ್ಯಕ್ತವಾಗಲಿದೆ. ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಇದರಿಂದ ಉತ್ಸಾಹ ಇರುತ್ತದೆ. ವಾರದ ಮಧ್ಯದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಸಲುವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 7. ಈಶ್ವರನಿಗೆ ತಿಲಾರ್ಚನೆ ಮಾಡಿರಿ.




ಮಾರ್ಕೆಟಿಂಗ್ ವಿಭಾಗದಲ್ಲಿ ಇರುವವರಿಗೆ ಕೆಲಸಗಳು ಅಂದುಕೊಂಡ ವೇಗದಲ್ಲಿ ಸಾಗುವುದಿಲ್ಲ. ಈ ವಿಚಾರದ ಸಲುವಾಗಿ ಹಿರಿಯ ಅಧಿಕಾರಿಗಳ ಜತೆಗೆ ಚರ್ಚೆ ನಡೆಸುವ ಸಾಧ್ಯತೆ ಇದೆ. ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು ಪಡೆಯಲಿದ್ದೀರಿ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಆರೋಗ್ಯದಲ್ಲಿ ಸ್ವಲ್ಪ ಮಟ್ಟಿಗೆ ಏರುಪೇರಾಗಲಿದೆ. ಶುಭದಿನ 9. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ಕ್ರೀಡಾ ಕ್ಷೇತ್ರದಲ್ಲಿ ತೊಡಗಿಕೊಂಡವರಿಗೆ ಯಶಸ್ಸು ಪಡೆಯುವ ಯೋಗ ಇದೆ. ಆರೋಗ್ಯವು ಉತ್ತಮವಾಗಿ ಇರುವುದರಿಂದ ಉತ್ಸಾಹದಿಂದ ಕಾಣಿಸುತ್ತೀರಿ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಪ್ರೀತಿಪಾತ್ರರ ಜತೆಗೆ ಮನರಂಜನೆಗೆ, ಫ್ಯಾಷನ್ ವಸ್ತುಗಳ ಖರೀದಿಗೆ ಸಮಯ ಕಳೆಯಲಿದ್ದೀರಿ. ಶುಭದಿನ 8. ಲಿಂಗಾಷ್ಟಕ ಓದಿರಿ.




ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಕಾಣುವ ಸಮಯ ಇದು. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ. ಮನೆಯ ಹಿರಿಯರು ಮೆಚ್ಚುಗೆ ಸೂಚಿಸಲಿದ್ದಾರೆ. ಸಂಸ್ಕೃತಿ, ಮನರಂಜನೆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸಲು ಅವಕಾಶ ದೊರೆಯಲಿದೆ. ಮಕ್ಕಳು ಮಾಡುವ ಕೆಲಸಗಳಿಂದ ಹೆಮ್ಮೆ ಮೂಡಲಿದೆ. ಶುಭದಿನ 9. ಹನುಮಾನ್ ಚಾಲಿಸ್ ಓದಿರಿ.




ಸಮಾಜ ಸೇವಾ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಮನರಂಜನೆ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸಲು ಬಯಸುವವರಿಗೆ ಅವಕಾಶ ದೊರೆಯಲಿದೆ. ಕೆಲ ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡುವುದರಿಂದ ಚಿಂತೆಗೆ ಕಾರಣವಾಗುತ್ತದೆ. ಹಳೆ ಸ್ನೇಹಿತರು ಶುಭ ಸುದ್ದಿ ನೀಡಲಿದ್ದಾರೆ. ಶುಭದಿನ 8. ನವದುರ್ಗಾ ಆರಾಧನೆ ಮಾಡಿರಿ.




ಪಿತ್ರಾರ್ಜಿತವಾದ ಆಸ್ತಿ ವ್ಯವಹಾರಗಳು ನೀವು ಅಂದುಕೊಂಡಂತೆ ನಡೆಯುತ್ತವೆ. ಆಸ್ತಿ ವ್ಯವಹಾರದಲ್ಲಿ ಲಾಭ ಗಳಿಸಲಿದ್ದೀರಿ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ರೀತಿಯಲ್ಲಿ ಅವಕಾಶಗಳು ನಿಮಗೆ ದೊರೆಯಲಿವೆ. ರಾಜಕಾರಣ ಹಾಗೂ ನಾಯಕತ್ವ ಸ್ಥಾನದಲ್ಲಿ ಇರುವವರಿಗೆ ಇನ್ನಷ್ಟು ಪ್ರಾಮುಖ್ಯ ದೊರೆಯಲಿದೆ. ಶುಭದಿನ 6. ಚಂಡಿಪಾರಾಯಣ ಮಾಡಿರಿ.




ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ಪ್ರೀತಿಪಾತ್ರರ ಜತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ನಿಮ್ಮ ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ಮಾಡಲಿದ್ದೀರಿ. ಶಿಕ್ಷಣ ಅಥವಾ ವ್ಯವಹಾರ ಉದ್ಯಮದ ವಿಚಾರವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 7. ಸೌಂದರ್ಯ ಲಹರಿ ಪಠಿಸಿರಿ.




ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರವಾಗಿ ತೀರ್ಪು ಬರುವ ಸಾಧ್ಯತೆಗಳು ಹೆಚ್ಚಿವೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ ಬೆಂಬಲ ದೊರೆಯಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಶುಭದಿನ 6. ವಿಷ್ಣು ಸಹಸ್ರನಾಮ ಪಠಿಸಿರಿ.